# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1443 |
| ಉತ್ತರಿಸಬೇಕಾದ ದಿನಾಂಕ | : | 30.12.2022 |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕ್ರೀಡಾ ಮೂಲಸೌಕರ್ಯಗಳ ಜೊತೆಗೆ ಉತ್ತಮ ಕ್ರೀಡಾ ತರಬೇತುದಾರರ ಕೊರತೆಯಿರುವುದನ್ನು ಸರ್ಕಾರ ಮನಗಂಡಿದೆಯೇ: | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ರಾಜ್ಯದಲ್ಲಿ 29 ಜಿಲ್ಲಾ ಕ್ರೀಡಾಂಗಣಗಳನ್ನು ಹಾಗೂ 123 ತಾಲ್ಲೂಕು ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ಪ್ರಸ್ತುತ ರಾಜ್ಯಾದ್ಯಂತ 16 ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್, 51 ಒಳಾಂಗಣ ಕ್ರೀಡಾಂಗಣಗಳು, 31 ಈಜುಕೊಳಗಳು, 04 ಸಿಂಥೆಟಿಕ್ ಹಾಕಿ ಟರ್ಫ್, 01 ಸಿಂಥೆಟಿಕ್ ಫುಟ್ಬಾಲ್ ಟರ್ಫ್ ಗಳನ್ನು ನಿರ್ಮಿಸಲಾಗಿದೆ.<br><br>ಪ್ರಸ್ತುತ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅನುದಾನಿತ ಸಂಸ್ಥೆಯಾದ ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ 67 ತರಬೇತುದಾರರು ಮಾಸಿಕ ಸಂಚಿತ ವೇತನ ಆಧಾರದಲ್ಲಿ ಹಾಗೂ 44 ತರಬೇತುದಾರರು ವಾರ್ಷಿಕ ಗುತ್ತಿಗೆ ಆಧಾರದಲ್ಲಿ ಮತ್ತು ಪೊಲೀಸ್ ಇಲಾಖೆಯಿಂದ ನಿಯೋಜನೆ ಮೇಲೆ ಒಬ್ಬರು ಈ ರೀತಿ ಒಟ್ಟು 112 ತರಬೇತುದಾರರು ಸೇವೆ ಸಲ್ಲಿಸುತ್ತಿದ್ದಾರೆ.<br><br>ತರಬೇತುದಾರರ ಸೇವೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರದ ಆದೇಶ ಸಂಖ್ಯೆ ವೈಎಸ್ ಡಿ-ಇವೈಡಬ್ಲ್ಯೂ /178/2021 ದಿನಾಂಕ 10-10-2022 ರಲ್ಲಿ 176 ತಾಲ್ಲೂಕು ತರಬೇತುದಾರರು ಕಂ ಸಂಯೋಜಕರ ಹುದ್ದೆಗಳನ್ನು ಸೃಜಿಸಿ ಆದೇಶಿಸಲಾಗಿದೆ. |
| ಆ) | ಹಾಗಿದ್ದಲ್ಲಿ, ಅಗತ್ಯ ತರಬೇತುದಾರರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ ಯಾವ ಕ್ರಮವಹಿಸಲಾಗಿದೆ. | ಹೊಸದಾಗಿ ಸೃಜಿಸಲಾದ ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸಲು ಕ್ರಮ ವಹಿಸಲಾಗಿದ್ದು, ನಂತರ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗುವುದು |
| ಇ) | ವಿಶೇಷವಾಗಿ ಮಹಿಳಾ ಕ್ರೀಡಾಪಟುಗಳ ಸಂಖ್ಯೆಗೆ ಅನುಗುಣವಾಗಿ ಮಹಿಳಾ ತರಬೇತುದಾರರನ್ನು ನೇಮಕಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? | ಪ್ರಸ್ತುತ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅನುದಾನಿತ ಸಂಸ್ಥೆಯಾದ ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ ಒಟ್ಟು 20 ಮಹಿಳಾ ತರಬೇತುದಾರರು ಕಾರ್ಯನಿರ್ವಹಿಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಅಗತ್ಯಾನುಸಾರ ಇನ್ನು ಹೆಚ್ಚಿನ ಮಹಿಳಾ ತರಬೇತದಾರರನ್ನು ನೇಮಕ ಮಾಡಲು ಕ್ರಮವಹಿಸಲಾಗುವುದು. |

**ವೈಎಸ್‌ಡಿ/ಇಬಿಬಿ/193/2022**

**(ಡಾ|| ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.